ಈ) ಹಾಗಿದ್ದಲ್ಲಿ ಈ ಶಾಲೆಯ ಕಟ್ಟಡವನ್ನು ದುರಸ್ತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು;

ಉ) ಪ್ರಸಕ್ತ ಸಾಲಿನಲ್ಲಿ ಈ ಶಾಲೆಯ ದುರಸ್ತಿಗಾಗಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗುವುದು?

ಪೊ|| ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಬಂದಿದೆ. ಕನ್ನಡ, ಮರಾಠಿ ಮತ್ತು ಉರ್ದು ಮಾಧ್ಯಮಗಳಲ್ಲಿ ನಡೆಯುತ್ತಿದೆ.

ಆ) ಈ ಶಾಲೆಯು 1951 ನೇ ಸಾಲಿನಲ್ಲಿ ಪ್ರಾರಂಭವಾಗಿರುತ್ತದೆ.

ಇ) ಬಂದಿದೆ.

ಈ) ಅನುದಾನದ ಲಭ್ಯತೆಯನ್ನಾಧರಿಸಿ ಆದ್ಯತೆ ಮೇಲೆ ಈ ಶಾಲೆಯ ಕಟ್ಟಡವನ್ನು ದುರಸ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಉ) ಪ್ರಸಕ್ತ ಸಾಲಿನಲ್ಲಿ ಆಯವ್ಯಯ ಲಭ್ಯತೆಯನ್ನಾಧರಿಸಿ ಈ ಶಾಲೆಯ ದುರಸ್ತಿಗಾಗಿ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಬಸವಸಂಗಮ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸುವುದು

1235 (1568) ಶ್ರೀ ಎಂ.ಜಿ. ಮುಳೆ (ಬಸವಕಲ್ಯಾಣ) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೂಡಲ ಸಂಗಮ ಅಭಿವೃದ್ಧಿ ಪ್ರಾಧಿಕಾರದ ಮಾದರಿಯಲ್ಲಿ ಬಸವ ಕಲ್ಯಾಣದಲ್ಲಿ ಬಸವ ಸಂಗಮ ಅಭಿವೃದ್ಧಿ ಪ್ರಾಧಿಕಾರವನ್ನು ಸ್ಥಾಪಿಸಲಾಗುವುದೆಂದು ಈ ಹಿಂದೆ ಘೋಷಣೆ ಮಾಡಿರುವುದು ನಿಜವಲ್ಲವೇ;

ಆ) ಹಾಗಿದ್ದಲ್ಲಿ, ಈ ಕಾರ್ಯವು ಈಗ ಯಾವ ಹಂತದಲ್ಲಿದೆ;

ಇ) ಜಗಜ್ಯೋತಿ ಬಸವಣ್ಣನವರ ಕಾರ್ಯಸ್ಥಳವಾದ ಬಸವ ಕಲ್ಯಾಣದಲ್ಲಿ ಸರ್ಕಾರವು ಈ ಹಿಂದೆ ಘೋಷಣೆ ಮಾಡಿರುವ ಪ್ರಕಾರ ಬಸವ ಸಂಗಮ ಅಭಿವೃದ್ಧಿ ಪ್ರಾಧಿಕಾರವನ್ನು ರಚನೆ ಮಾಡಿ ಅದರ ಮೂಲಕ ಮಹಾತ್ಮ ಬಸವೇಶ್ವರರ ಜನ್ಮಸ್ಥಳ ಕಾರ್ಯಸ್ಥಳ ಮತ್ತು ಐಕ್ಯಸ್ಥಳಗಳನ್ನು ಅಭಿವೃದ್ಧಿ ಪಡಿಸಲಾಗುವುದೇ;

ಈ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ಪ್ರವೇಶ ಪಡೆದ ವೈದ್ಯಕೀಯ ವಿದ್ಯಾರ್ಥಿಗಳ ವಿವರ

1242 (1391) ಶ್ರೀ ಪಾಟೀಲ್ ಡಿ.ಆರ್. (ಗದಗ್) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿರುವ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಅರ್ಹತೆಯ ಮೇಲೆ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? ಶೈಕ್ಷಣಿಕ ವರ್ಷವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು?

ಅ) ಈ ಅಂಕಿ ಅಂಶಗಳಿಂದ ಯಾವ ಯಾವ ಜಿಲ್ಲೆಯ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವುದು ಮೇಲು ನೋಟಕ್ಕೆ ವೇದ್ಯವಾಗಿದೆ?

ಆ) ಈ ಅನ್ಯಾಯ ಸರಿಪಡಿಸಲು ಸರಕಾರ ಯಾವ ಕ್ರಮಗಳನ್ನು ಕೈಗೊಳ್ಳಲು ಸಾಧ್ಯ ಹಾಗೂ ಈ ಕ್ರಮ ಕೈಗೊಳ್ಳಲು ಎಷ್ಟು ಕಾಲಾವಕಾಶ ಬೇಕು?

ಡಾ॥ ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಕಳೆದ ಮೂರು ಶೈಕ್ಷಣಿಕ ವರ್ಷದಲ್ಲಿ ಮೆಡಿಕಲ್ ಮತ್ತು ದಂತ ವೈದ್ಯಕೀಯ ಸೀಟುಗಳನ್ನು ಪಡೆದ ಜಿಲ್ಲಾವಾರು ಅಂಕಿ ಅಂಶ ತೋರಿಸುವ ತಃಖ್ತೆ ಇದರೊಂದಿಗೆ ಲಗತ್ತಿಸಿದೆ.

ಆ) ಸಾಮಾನ್ಯ ಪ್ರವೇಶ ಪರೀಕ್ಷಾ ಘಟಕದಲ್ಲಿ ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಸೀಟುಗಳನ್ನು ನೀಡುತ್ತಿರುವುದರಿಂದ ಯಾವ ಜಿಲ್ಲೆಯ ಅಭ್ಯರ್ಥಿಗಳಿಗೂ ಅನ್ಯಾಯವಾಗಿಲ್ಲ.

ಇ) ಉದ್ಭವಿಸುವುದಿಲ್ಲ.

Statement Showing District wise seat secured in MBBS and BDS for the last three years

	YEAR					
	2001-2002		2000-2001		1999-2000	
Name of the District	Medical	Dental	Medical	Dental	Medical	Dental
1. Bagalkot	046	25	53	24	36	22
2. Bangalore Rural	075	39	39	27	43	24
3. Bangalore Urban	499	359	445	327	404	400
4. Belgaum	077	71	103	63	75	60
5. Bellary	059	25	69	37	75	29
6. Bidar	039	23	43	24	48	20
7. Bijapur	045	35	52	31	44	25
8. Chamarajnagar	017	10	06	14	05	16
9. Chickmagalur	052	21	28	20	26	20
10. Chitradurga	064	18	46	17	40	13
11. Dakshina Kannada	092	83	107	48	93	57
12. Davangere	057	36	53	33	48	29
13. Dharwad	048	33	56	34	41	39
14. Gadag	021	17	20	04	19	07
15. Gulbarga	094	49	91	44	85	66
16. Hassan	060	19	47	13	35	29
17. Haveri	024	18	20	14	29	20
18. Kodagu	018	19	13	15	22	17

1	2	3	4	5	6	7
19. Kolar	114	47	89	38	82	54
20. Koppal	016	07	11	04	07	08
21. Mandya	056	26	45	32	54	31
22. Mysore	067	56	76	55	67	53
23. Raichur	043	28	35	15	20	26
24. Shimoga	082	30	44	25	55	33
25. Tumkur	099	35	74	24	80	41
26. Udupi	057	38	44	38	49	40
27. Uttar Kannada	022	26	26	20	35	31

ಗ್ರಾಮೀಣ ಪ್ರದೇಶಗಳಲ್ಲಿನ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಪ್ರತಿಭಾನ್ವಿತ ಶಿಕ್ಷಕರಿಂದ ಪಾಠ ಪ್ರವಚನ

1244(1394) ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಹಿತಿ ತಂತ್ರಜ್ಞಾನ ಬಳಸಿಕೊಂಡು ಗ್ರಾಮೀಣ ಪ್ರದೇಶದಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿರುವ ವಿದ್ಯಾರ್ಥಿಗಳಿಗೆ ಬೆಂಗಳೂರಿನಂತಹ ನಗರ ಪ್ರದೇಶಗಳಲ್ಲಿ ವಾಸಿಸುವ ಪ್ರತಿಭಾನ್ವಿತ ಶಿಕ್ಷಕರಿಂದ ಪಾಠ ಪ್ರವಚನ ಮಾಡಿಸುವ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು?

ಆ) ಈ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಇ) ಈ ಉದ್ದೇಶ ಸಾಧಿಸಲು ಬೇಕಾಗಿರುವ ಅವಧಿಯೆಷ್ಟು?

ಈ) ಈ ಯೋಜನೆಯ ಅಂದಾಜು ವೆಚ್ಚ ಎಷ್ಟಾಗಬಹುದು?

ಪೊ॥ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ರಾಜ್ಯ ಸಚಿವರು): ಅ) ಇಂತಹ ಯೋಜನೆಯನ್ನು ಈಗಾಗಲೇ ಕಳೆದ ವರ್ಷಗಳಿಂದ ಅನುಷ್ಠಾನಗೊಳಿಸಲಾಗುತ್ತಿದೆ.

ಆ) 2002-03ನೇ ಸಾಲಿಗೆ ಸಂಬಂಧಿಸಿದಂತೆ ಈ ಯೋಜನಾ ಕಾರ್ಯಕ್ರಮಕ್ಕೆ 44.00 ಲಕ್ಷ ರೂ.ಗಳನ್ನು ಹಂಚಿಕೆ ಮಾಡಲಾಗಿದೆ.

ಗದಗ್ ಕ್ಷೇತ್ರದ ಹುಲಕೋಟಿಯಲ್ಲಿ ಮಹಿಳೆಯರಿಗೆ ಮಹಾವಿದ್ಯಾಲಯ ಪ್ರಾರಂಭ

1245 (1395) ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದಗ ಮತ ಕ್ಷೇತ್ರದ ಹುಲಕೋಟಿ ಗ್ರಾಮದಲ್ಲಿ ಮಹಿಳೆಯರಿಗಾಗಿ ಪದವಿ ಮಹಾವಿದ್ಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿರುವುದು ಯಾವಾಗ;

ಆ) ಈ ಮಹಾ ವಿದ್ಯಾಲಯವನ್ನು ಆ ಭಾಗದ ಬಾಲಕಿಯರ ಅನುಕೂಲಕ್ಕಾಗಿ ಇದೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದೇ?